ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, "2007ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ.ಎಸ್.ಯಡಿಯೂರಪ್ಪ: ಮಾನ್ಯ ಉಪಾಧ್ಯಕ್ಷರೆ, 2007ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಪರ್ಯಾಲೋಚನಾ ಪ್ರಸ್ತಾಪ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕ,2007

ಶ್ರೀ ಬಿ.ಎಸ್.ಯಡಿಯೂರಪ್ಪ: ಮಾನ್ಯ ಉಪಾಧ್ಯಕ್ಷರೆ, 2007ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, "2007ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ2 ಮತ್ತು 3

ಉಪಾಧ್ಯಕ್ಷರು: "ಖಂಡ 2 ಮತ್ತು 3 ಈ ವಿಧೇಯಕ ಅಂಗವಾಗಿರುತ್ತದೆ." ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ಮತ್ತು 3 ವಿಧೇಯಕ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ: ಮಾನ್ಯ ಉಪಾಧ್ಯಕ್ಷರೆ, 2007ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ-3) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

"2007ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ -3) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಅನುಬಂಧ-1)

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ(ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ)(ವಿಶೇಷ ಉಪಬಂಧಗಳು) ವಿಧೇಯಕ,2007

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಹೆಚ್. ಶಂಕರಮೂರ್ತಿ(ಉನ್ನತ ಶಿಕ್ಷಣ ಸಚಿವರು):- ಮಾನ್ಯ ಉಪಾಧ್ಯಕ್ಷರೆ, 2007ನೇ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ)(ವಿಶೇಷ ಉಪಬಂಧಗಳು) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,